ಅ) ಕೊರಟಗೆರೆ ನಗರದ ಕುಡಿಯುವ ನೀರಿನ ಸಮಸ್ಯೆ ಶಾಶ್ವತ ಪರಿಹಾರಕ್ಕೆ ಸರ್ಕಾರದವರು ಹಮ್ಮಿಕೊಂಡಿರುವ ಯೋಜನೆಗಳಾವುವು?

ಇ) ಈ ಯೋಜನೆ ಯಾವಾಗ ಪ್ರಾರಂಭಿಸಲಾಗುವುದು. ಈ ಯೋಜನೆಗೆ ಎಷ್ಟು ಹಣ ಒದಗಿಸಲಾಗಿದೆ. ಈ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು.

ಶ್ರೀ ಎಸ್.ಎಂ.ಕೃಷ್ಣ (ಮುಖ್ಯ ಮಂತ್ರಿಯವರು):

ಅ) ಬಂದಿದೆ.

ಆ) ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿಯು ಯೋಜನೆಯನ್ನು ತಯಾರಿಸುತ್ತಿದೆ.

ಇ) ಉದ್ಭವಿಸುವುದಿಲ್ಲ.

ಕೊರಟಗೆರೆ ತಾಲ್ಲೂಕಿನ ಪಟ್ಟಣದಲ್ಲಿ ಒಳಚರಂಡಿ ಯೋಜನೆ ಜಾರಿ.

255(250)

ಶ್ರೀ ಸಿ.ಚನ್ನಿಗಪ್ಪ(ಕೊರಟಗೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ಪಟ್ಟಣಗಳ ಜನಸಂಖ್ಯೆ ಎಷ್ಟು?

ಆ) ಈ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆ ಇಲ್ಲದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಕೊರಟಗೆರೆ ಪಟ್ಟಣದಲ್ಲಿ ಒಳಚರಂಡಿ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಈ)ಈ ಪಟ್ಟಣದಲ್ಲಿ ಒಳಚರಂಡಿಯ ವ್ಯವಸ್ಥೆ ಇಲ್ಲದೇ ನಾಗರೀಕರ ಆರೋಗ್ಯದ ಮೇಲೆ ಹಲವಾರು ದುಷ್ಪರಿಣಾಮಗಳು ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಉ) 2000-2001ನೇ ಸಾಲಿನಲ್ಲಿ ಕೊರಟಗೆರೆ ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಲು ಹಣಕಾಸು ನೆರವು ನೀಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಎಂ.ಕೃಷ್ಣ (ಮುಖ್ಯ ಮಂತ್ರಿಯವರು):

ಅ) 1991ನೇ ಜನಗಣತಿ ಪ್ರಕಾರ ಕೊರಟಗೆರೆ ಪಟ್ಟಣದ ಜನಸಂಖ್ಯೆ 11,531.

ಆ) ಬಂದಿದೆ.

ಇ, ಈ ಮತ್ತು ಉ) ಸದ್ಯಕ್ಕೆ ಸಾಕಷ್ಟು ನೀರು ಸರಬರಾಜು ಇಲ್ಲದ ಪ್ರಯುಕ್ತ ಒಳಚರಂಡಿ ಯೋಜನೆ ತೆಗೆದುಕೊಳ್ಳುವ ಪ್ರಸ್ತಾವನೆಯಿಲ್ಲ.

ವಸತಿ ನಿಲಯ ಮಂಜೂರಾತಿ.

256(258)

ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕು ಗ್ರಾಮಾಂತರ ಪ್ರದೇಶಕ್ಕೆ ಎಷ್ಟು ಹಾಸ್ಟೆಲ್‌ನ್ನು ಮಂಜೂರು ಮಾಡಲಾಗಿದೆ; ವಿವರ ನೀಡುವುದು?

ಶ್ರೀ ಕಾಗೋಡು ತಿಮ್ಮಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಸಮಾಜ ಕಲ್ಯಾಣ ಇಲಾಖೆಯು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗಾಗಿ ಶಿವಮೊಗ್ಗ ತಾಲ್ಲೂಕಿನ ಗ್ರಾಮಾಂತರ ಪ್ರದೇಶಗಳಾದ 1. ಕೊಮ್ಮನಾಳ 2.ಕುಂಸಿಯಲ್ಲಿ ಸರ್ಕಾರಿ ಮೆಟ್ರಿಕ್-ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿ ನಡೆಸಲಾಗುತ್ತಿದೆ.

ಹಿಂದುಳಿದ ವರ್ಗಗಳ ಇಲಾಖೆಯಿಂದ 6 ಮೆಟ್ರಿಕ್-ಪೂರ್ವ ಹಾಗೂ 2 ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳನ್ನು ನಡೆಸಲಾಗುತ್ತಿದೆ. ವಿವರಗಳು ಈ ಕೆಳಕಂಡತಿವೆ:

ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳು

1) ಶಿವಮೊಗ್ಗ ಬಾಲಕರು

2) ಶಿವಮೊಗ್ಗ ಬಾಲಕಿಯರು